## ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 1007
2. **ಸದಸ್ಯರ ಹೆಸರು** : ಶ್ರೀ ಅಡಗೂರ್ ಹೆಚ್ ವಿಶ್ವನಾಥ್ (ನಾಮ ನಿರ್ದೇಶನ ಹೊಂದಿದವರು)
3. **ಉತ್ತರಿಸಬೇಕಾದ ದಿನಾಂಕ** : 23.02.2024
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| **ಅ)** | ರಾಜ್ಯದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳನ್ನು ಕೆ.ಸಿ.ಎಸ್.ಆರ್ ನಿಯಮಾವಳಿಗಳಡಿಯಲ್ಲಿ ಸಾಮಾನ್ಯ ವರ್ಗಾವಣೆ ಒಳಪಡಿಸಲಾಗುವುದೇ; (ಇರುವ ಷರತ್ತು ಮತ್ತು ನಿಬಂಧನೆಗಳ ವಿವರ ನೀಡುವುದು) | ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರು ಸೇರಿದಂತೆ ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶ ಸಂಖ್ಯೆ; ಸಿಆಸುಇ 22 ಸೇನೌವ 2013, ದಿನಾಂಕ: 07.06.2013ರಲ್ಲಿ ನೀಡಿರುವ ವರ್ಗಾವಣಾ ಮಾರ್ಗಸೂಚಿ ಹಾಗೂ ಈ ಸಂಬಂಧ ಕಾಲಕಾಲಕ್ಕೆ ಸಿಆ.ಸು.ಇಲಾಖೆಯು ಹೊರಡಿಸುವ ವರ್ಗಾವಣೆ ಮಾರ್ಗಸೂಚಿಗಳನ್ನು ಅನುಸರಿಸಿ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತದೆ. |
| **ಆ)** | ಸದರಿ ನಿಯಮಾವಳಿಗಳಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಕಳೆದ 10 ರಿಂದ 20 ವರ್ಷಗಳವರೆಗೆ ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಸದರಿ ಅಧಿಕಾರಿ / ಸಿಬ್ಬಂದಿಗಳನ್ನು ಬೇರೆಡೆಗೆ ವರ್ಗಾವಣೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು; | ಗ್ರೂಪ್-ಎ ವೃಂದದ ಯಾವುದೇ ಅಧಿಕಾರಿಗಳು ಬಾಗಲಕೋಟೆ ಜಿಲ್ಲಾ ಪಂಚಾಯಿತಿ ಹಾಗೂ ಅದರಡಿಯಲ್ಲಿ ಬರುವ ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ಕಳೆದ 10 ವರ್ಷ ಮೀರಿದ ಅವಧಿಗೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಇರುವುದಿಲ್ಲ.<br><br>ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ಕೆಲವು ಅಧಿಕಾರಿ / ನೌಕರರು ಬಾಗಲಕೋಟೆ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿ 10 ವರ್ಷಗಳು ಮೀರಿದ ಅವಧಿಗೆ ಕಾರ್ಯನಿರ್ವಹಿಸುತ್ತಿದ್ದಾರೆ. ಇದರಲ್ಲಿ ಬಹುತೇಕ ಮಂದಿ ಗ್ರೂಪ್-ಡಿ ವೃಂದಕ್ಕೆ ಸೇರಿರುತ್ತಾರೆ. |

| | | |
|---|---|---|
| | | ಈ ಪೈಕಿ ಗ್ರೂಪ್-ಬಿ ವೃಂದದ ಅಧಿಕಾರಿಗಳ ಜೇಷ್ಠತಾ ಘಟಕವು ರಾಜ್ಯ ಮಟ್ಟದ್ದಾಗಿದ್ದು, ಇವರುಗಳಿಗೆ ಸರ್ಕಾರದ ಸಾಮಾನ್ಯ ವರ್ಗಾವಣೆ ಮಾರ್ಗಸೂಚಿಗಳು ಅನ್ವಯವಾಗುತ್ತದೆ. ಉಳಿದಂತೆ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ನೌಕರರ ಜೇಷ್ಠತಾ ಘಟಕವು ಜಿಲ್ಲಾ ಪಂಚಾಯಿತಿ ಆಗಿರುವುದರಿಂದ ಅವರುಗಳನ್ನು ಅಂತರ್ ಜಿಲ್ಲಾ ವರ್ಗಾವಣೆ ಮಾಡಲು ಅವಕಾಶವಿರುವುದಿಲ್ಲ. |
| **ಇ)** | ಸದರಿ ಅಧಿಕಾರಿ / ಸಿಬ್ಬಂದಿ ವರ್ಗದವರ ದುರ್ವರ್ತನೆ ಹಾಗೂ ಭ್ರಷ್ಟಾಚಾರದಿಂದಾಗಿ ಜಿಲ್ಲೆಯಲ್ಲಿ ಸಾಕಷ್ಟು ಕೆಲಸ ಕಾರ್ಯಗಳು ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಿರ್ದಿಷ್ಟವಾಗಿ ದೀರ್ಘಾವಧಿಯಿಂದ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಯ ದುರ್ವರ್ತನೆ ಹಾಗೂ ಭ್ರಷ್ಟಾಚಾರದಿಂದಾಗಿ ಜಿಲ್ಲೆಯ ಕೆಲಸ ಕಾರ್ಯಗಳು ವಿಳಂಬವಾಗುತ್ತಿರುವ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| **ಈ)** | ಹಾಗಿದ್ದಲ್ಲಿ, ಸರ್ಕಾರವು ಕೂಡಲೇ ಇವುಗಳ ಮೇಲೆ ಶಿಸ್ತು ಕ್ರಮ ಕೈಗೊಂಡು ಬೇರೆಡೆಗೆ ವರ್ಗಾಯಿಸಲು ಕ್ರಮ ಕೈಗೊಳ್ಳುವುದೇ? | ಅಂತಹ ಪ್ರಕರಣಗಳು ವರದಿಯಾದಲ್ಲಿ, ಸಂಬಂಧಪಟ್ಟ ಅಧಿಕಾರಿ / ನೌಕರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಗ್ರಾಅಪ 61 ಪಬವ 2024 (ಇ)

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು

ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು